(೫೦)

ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಉಪತಹಶೀಲ್ದಾರವರ ನಾಡಕಛೇರಿ ಕಛೇರಿ ನಾಡಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/54/2015-16. ದಿನಾಂಕ:21-06-2016.

| ವಾದಿಗಳು | ಪ್ರತಿವಾದಿಗಳು |
|---|---|
| ಎ.ಪಾರ್ವತಮ್ಮ ಗಂಡ ಲೇಟ್ ಅನಂದೇವನಹಳ್ಳಿ ಸಿದ್ರಾಮಪ್ಪ ಕೆ.ಅಯ್ಯನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು | ವೀರೇಶ ತಂದೆ ಎ.ಎಸ್.ಕೊಟ್ರೇಶಪ್ಪ ಕೆ.ಅಯ್ಯನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಕೆ.ಅಯ್ಯನಹಳ್ಳಿ ಗ್ರಾಮದ ಸನಂ 251/1ಪೈಕಿ. ವಿಸ್ತೀರ್ಣ 2-68. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಕೆ.ಅಯ್ಯನಹಳ್ಳಿ ಗ್ರಾಮದ ಸನಂ 251/1ಪೈಕಿ. ವಿಸ್ತೀರ್ಣ 2-68. ಎಕ್ರೆ ಜಮೀನನ್ನು ಸದರಿ ಗ್ರಾಮದ ಎ.ಪಾರ್ವತಮ್ಮ ಗಂಡ ಲೇಟ್ ಆನಂದೇವನಹಳ್ಳಿ ಸಿದ್ರಾಮಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಕೆ.ಅಯ್ಯನಹಳ್ಳಿ ಇವರು ನಮೂನೆ-21 ನೋಟಿಸನ್ನು ದಿನಾಂಕ 17-09-2014 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ವೀರೇಶ ತಂದೆ ಎ.ಎಸ್.ಕೋಟ್ರೇಶಪ್ಪ. ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 16/2014-15. ದಿನಾಂಕ 14-10-2015 ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 03-11-2015 ರಿಂದ 21-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಮತ್ತು ತಕರಾರುದಾರರು ಹಾಗೂ ಅವರ ಪರ ನ್ಯಾಯಾವಾದಿಗಳು ಹಾಜರಾಗಿರುತ್ತಾರೆ. ಅರ್ಜಿದಾರರು ಕೆ.ಅಯ್ಯನಹಳ್ಳಿ ಗ್ರಾಮದ ಸನಂ 251/1.ಪೈಕಿವಿಸ್ತೀರ್ಣ 2-68. ಎಕ್ರೆ ಜಮೀನು ನನ್ನ ಗಂಡನಾದ ಆನಂದೇವನಹಳ್ಳಿ ಸಿದ್ರಾಮಪ್ಪ ಇವರ ಹೆಸರಿನಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 04-11-1999 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರ ಪರ ನ್ಯಾಯಾವಾದಿಗಳು ಹಾಜರಾಗಿದ್ದು ಸದರಿ ವಿವಾದಿತ ಜಮೀನು ಪ್ರತಿವಾದಿಯ ಅಜ್ಜನಾದ ಸಿದ್ರಾಮಪ್ಪ ತಂದೆ ವೀರಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಪ್ರತಿವಾದಿ ಮತ್ತು ಅರ್ಜಿದಾರರ ನಡುವೆ ಇಲ್ಲಿಯವರೆಗೂ ಯಾವುದೇ ಪಾಲು ವಿಭಾಗವಾಗಿರುವುದಿಲ್ಲ ಪ್ರತಿವಾದಿ ಮತ್ತು ಅರ್ಜಿದಾರರು ಒಂದೇ ಕುಟುಂಬದ ಸದಸ್ಯರು ಇರುತ್ತಾರೆ.

318



ಸದರಿ ವಿವಾದಿತ ಆಸ್ತೀಯನ್ನು ಅರ್ಜಿದಾರಳಾದ ಪಾರ್ವತಮ್ಮ ತಾನೊಬ್ಬಳೆ ಸಿದ್ರಾಮಪ್ಪನ ವಾರಸುದಾರಳೆಂದು ತನ್ನ ಹೆಸರಿಗೆ ಹಕ್ಕು ಬದಲಾವಣೆ ಮಾಡಬೇಕೆಂದು ಕೇಳಿರುವುದು ತಪ್ಪಾಗಿರುತ್ತದೆ. ಸದರಿ ಸಿದ್ರಾಮಪ್ಪ ತಂದೆ ವೀರಪ್ಪ ಇವರು ಸದರಿ ವಿವಾದಿತ ಜಮೀನು ಇವರ ಹೆಸರಲ್ಲಿರುವುದರಿಂದ ಅರ್ಜಿದಾರರಿಗೆ ಯಾವುದೇ ಸತ್ತನ್ನು ಲಭೀಸುವುದಿಲ್ಲ ಕಾರಣ ಸದರಿ ಸಿದ್ರಾಮಪ್ಪನು ಸದರಿ ಜಮೀನನ್ನು ಯಾವುದೇ ವಿಲ್ಲು ನಾಮೆಯಾನೆ ಮಾಡದೇ ಮೃತರಾಗಿರುವುದರಿಂದ ಈಗ ಸದರಿ ಆಸ್ತೀಗೆ ಸಂಬಂದಿಸಿದಂತೆ ಅರ್ಜಿದಾರಳಾದ ಪಾರ್ವತಮ್ಮ ಮತ್ತು ತನ್ನ ಮಕ್ಕಳಾದ ಮಂಜುನಾಥ. ಕೋಟ್ರೇಶಪ್ಪ. ಇವರೆಲ್ಲರೂ ಸದರಿ ವಿವಾದಿತ ಜಮೀನಿಗೆ ಕಾನೂನು ಬದ್ದ ವಾರಸುದಾರರಾಗಿರುತ್ತಾರೆ. ಕಾರಣ ಅರ್ಜಿದಾರಳು ಇನ್ನುಳಿದ ಆಸ್ತೀಗಳನ್ನು ಬಿಟ್ಟು ಇದೊಂದೆ ಆಸ್ತೀಯನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆಗೆ ಅರ್ಜಿ ಸಲ್ಲಿಸಿರುವುದು ಕಾನೂನಿನ ಪ್ರಕಾರ ತಪ್ಪಾಗಿರುತ್ತದೆ.

ಮೇಲಿನ ಎಲ್ಲಾ ಕಾರಣಗಳಿಂದ ಅರ್ಜಿದಾರರನ್ನು ಮತ್ತು ಪ್ರತಿವಾದಿಗಳನ್ನು ಜಂಟಿಯಾಗಿ ಸದರಿ ಜಮೀನಿನ ಪಹಣಿಯಲ್ಲಿ ಹೆಸರುಗಳನ್ನು ನಮೂದಿಸಬೇಕೆಂದು ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರು ಹೇಳಿಕೆ ಮತ್ತು ತಕರಾರುದರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ಸದರಿ ಜಮೀನಿನ ಬಗ್ಗೆ ಗ್ರಾಮಲೆಕ್ಕಿಗರು ಗ್ರಾಮದಲ್ಲಿ ಮರು ವಿಚಾರಣೆ ಮಾಡಲಾಗಿ ಸದರಿ ಜಮೀನು ಯಥಾಸ್ಥಿತಿಯಂತೆ ಮುಂದುವರೆಸಲು ಯಾವುದೇ ತರವಾದ ಆಕ್ಷೇಪಣೆಗಳು ಇಲ್ಲವೆಂದು ವರದಿ ಸಲ್ಲಿಸಿರುತ್ತಾರೆ. ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಕೆ.ಅಯ್ಯನಹಳ್ಳಿ ಗ್ರಾಮದ ಸನಂ 251/1ಪೈಕಿ. ವಿಸ್ತೀರ್ಣ 2-68. ಎಕ್ರೆ ಜಮೀನನ್ನು ಅರ್ಜಿದಾರರು ಕೋರಿರುವ ಅರ್ಜಿಯನ್ನು ತಿರಸ್ಕರಿಸುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 21-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಎ.ಪಾರ್ವತಮ್ಮ ಗಂಡ ಲೇಟ್ ಆನಂದೇವನಹಳ್ಳಿ ಸಿದ್ರಾಮಪ್ಪ ಕೆ.ಅಯ್ಯನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ವೀರೇಶ ತಂದೆ ಎ.ಎಸ್.ಕೊಟ್ರೇಶಪ್ಪ. ಕೆ.ಅಯ್ಯನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರ ಪರ ವಕೀಲರಾದ ಕೆ.ಎಸ್.ನಾಗರಾಜ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.

4/8/16